## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 723 (806)

ಸದಸ್ಯರ ಹೆಸರು : ಶ್ರೀ ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 16-12-2024

ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಮಧುಗಿರಿಯಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ ಕಚೇರಿ ಪ್ರಾರಂಭಿಸಲು ಪ್ರಸ್ತಾವನೆಗಳನ್ನು ಸಲ್ಲಿಸಲಾಗಿದೆಯೇ; | ಹೌದು.<br>ಮಧುಗಿರಿಯಲ್ಲಿ ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)ಯ ಶೈಕ್ಷಣಿಕ ಜಿಲ್ಲಾ ಉಪ ನಿರ್ದೇಶಕರ ಕಚೇರಿಯನ್ನು ಪ್ರಾರಂಭಿಸುವ ಪ್ರಸ್ತಾವನೆಯು ನಿರ್ದೇಶನಾಲಯದಿಂದ ಸ್ವೀಕೃತವಾಗಿರುತ್ತದೆ.<br><br>ಈ ಪ್ರಸ್ತಾವನೆಗೆ ಆರ್ಥಿಕ ಇಲಾಖೆಯ ಸಹಮತಿ ಕೋರಲಾಗಿತ್ತು. ಆರ್ಥಿಕ ಇಲಾಖೆಯು ಸದರಿ ಪ್ರಸ್ತಾವನೆಗೆ ಕೆಲವೊಂದು ಮಾಹಿತಿಯನ್ನು ಒದಗಿಸುವಂತೆ ಕೋರಿರುತ್ತದೆ.<br><br>ಆರ್ಥಿಕ ಇಲಾಖೆಯು ಕೋರಿರುವ ಮಾಹಿತಿಯನ್ನು ಕ್ರೋಢೀಕರಿಸಲಾಗುತ್ತಿದ್ದು, ಸದರಿ ಮಾಹಿತಿಯನ್ನು ನಿರ್ದೇಶನಾಲಯದಿಂದ ಪಡೆದು ನಂತರ ಆರ್ಥಿಕ ಇಲಾಖೆಯ ಸಹಮತಿ ಪಡೆದು ಮಧುಗಿರಿಯಲ್ಲಿ ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ಯ ಶೈಕ್ಷಣಿಕ ಜಿಲ್ಲಾ ಉಪ ನಿರ್ದೇಶಕರ ಕಚೇರಿಯನ್ನು ಪ್ರಾರಂಭಿಸುವ ಬಗ್ಗೆ ನಿಯಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲಾಗುವುದು. |
| ಆ) | ಸಲ್ಲಿಕೆಯಾಗಿದ್ದಲ್ಲಿ, ಮಧುಗಿರಿಯನ್ನು "ಶೈಕ್ಷಣಿಕ ಜಿಲ್ಲೆಯೆಂದು ಘೋಷಣೆ" ಮಾಡಿ 24 ವರ್ಷ ಕಳೆದರೂ ಮಧುಗಿರಿ, ಕೊರಟಗೆರೆ, ಪಾವಗಡ, ಶಿರಾ ತಾಲ್ಲೂಕುಗಳನ್ನು ಒಳಗೊಂಡಂತೆ ಇದುವರೆಗೂ ಮಧುಗಿರಿಯಲ್ಲಿ ಜಿಲ್ಲಾ ಉಪ ನಿರ್ದೇಶಕರ ಕಚೇರಿ ಪ್ರಾರಂಭಿಸುವ ಬಗ್ಗೆ ಸರ್ಕಾರ ಏನು ಕ್ರಮಕೈಗೊಂಡಿದೆ; (ವಿವರ ನೀಡುವುದು) | |
| ಇ) | ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಜಿಲ್ಲಾ ಸದರಿ ಕಚೇರಿಯನ್ನು ಪ್ರಾರಂಭಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು? ಯಾವ ಕಾಲಮಿತಿಯಲ್ಲಿ ಸದರಿ ಕಚೇರಿಯನ್ನು ಪ್ರಾರಂಭಿಸಲಾಗುವುದು? (ವಿವರ ನೀಡುವುದು) | |

ಸಂಖ್ಯೆ: ಇಪಿ 442 ಡಿಜಿಡಬ್ಲ್ಯೂ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು